ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ಕರ್ನಾಟಕ ವಿಧಾನ ಸಭೆ ಅಧಿವೇಶನ

ಪತ್ರಿಕೆಯ ಹೆಸರು : NAME OF THE NEWS PAPER: ಸಂಯುಕ್ತ ಕರ್ನಾಟಕ ದಿನಾಂಕ : DATE : 03/03/2020

# ನಾಡು ನುಡಿ ರಕ್ಷಣೆಗೆ ವೀರಸಂಕಲ್ಪ

ವಿಧಾನಸಭೆ: ನೆಲ, ಜಲ, ನಾಡು, ನುಡಿ ಸೇರಿದಂತೆ ರಾಜ್ಯದ ಹಿತ ಕಾಪಾಡಲು ರಾಜ್ಯ ಸರ್ಕಾರ ಬದ್ಧವಾಗಿದೆ. ಯಾವುದೇ ಕಾರಣಕ್ಕೂ ಅನ್ಯಾಯ ಆಗಲು ಬಿಡುವುದಿಲ್ಲ ಎಂದು ಮುಖ್ಯಮಂತ್ರಿ ಯಡಿಯೂರಪ್ಪ ಸದನಕ್ಕೆ ಭರವಸೆ ನೀಡಿದ್ದಾರೆ.

ರಾಜ್ಯಪಾಲರ ವಂದನಾ ನಿರ್ಣಯದ ಮೇಲೆ ವಿಧಾನಸಭೆಯಲ್ಲಿ ವಿಪಕ್ಷಗಳ ಮುಖಂಡರೂ ಸೇರಿದಂತೆ ಶಾಸಕರು ಪ್ರಸ್ತಾಪಿಸಿದ ಸಂಗತಿಗಳಿಗೆ ಉತ್ತರ ನೀಡಿದ ಮುಖ್ಯಮಂತ್ರಿ ಯಡಿಯೂರಪ್ಪ ಮಹಾರಾಷ್ಟ್ರ ಪದೇಪದೇ ಗಡಿ ವಿಚಾರದಲ್ಲಿ ಕ್ಯಾತೆ ತೆಗೆಯುತ್ತಿದೆ. ಇದರಿಂದ ಕನ್ನಡಿಗರ್ಯಾರು ಅಧೀರ ಆಗಬೇಕಿಲ್ಲ. ಬಹು ಹಿಂದೆಯೇ ಕರ್ನಾಟಕವು ಮಹಾಜನ್ ವರದಿಗೆ ಬದ್ಧ ಎಂದು ಸ್ಪಷ್ಟಪಡಿಸಿದೆ. ಅದೇ ಧಾಟಿಯಲ್ಲಿ ಸರ್ಕಾರ ಮುಂದುವರಿಯಲಿದೆ. ಯಾವುದೇ ಕಾರಣಕ್ಕೂ ಕರ್ನಾಟಕದ ನಿಲುವಿನಲ್ಲಿ ಬದಲಾವಣೆ ಇಲ್ಲ ಎಂದು ಸ್ಪಷ್ಟಪಡಿಸಿದರು.

ಬೆಂಗಳೂರು ಸೇರಿದಂತೆ ರಾಜ್ಯದೆಲ್ಲೆಡೆ ನಡೆಯುತ್ತಿರುವ ಸರ್ಕಾರಿ ಭೂಮಿ ಕಬಳಿಕೆ ತಡೆಯಲು ಮತ್ತು ಕಬಳಿಕೆಯಾದ ಭೂಮಿ ಮರುವಶಪಡಿಸಿಕೊಳ್ಳಲು ಸಮಿತಿ ರಚಿಸಿದೆ. ಮಾಜಿ ಸಭಾಧ್ಯಕ್ಷ ಕೆಜಿ. ಬೋಪಯ್ಯ ನೇತೃತ್ವದಲ್ಲಿ ಸಮಿತಿ ಕಾರ್ಯನಿರ್ವಹಿಸಲಿದೆ. ಯಾವುದೇ ಕಾರಣಕ್ಕೂ ಸರ್ಕಾರಿ ಭೂಮಿಯನ್ನು ಭೂಗಳ್ಳರ ಪಾಲಾಗಲು ಬಿಡುವುದಿಲ್ಲ ಎಂದರು.

ಮಹದಾಯಿ ಯೋಜನೆಗೆ ರಾಜ್ಯ ಸರ್ಕಾರ ಆದ್ಯತೆ ನೀಡಲಿದೆ. ಬಜೆಟ್‌ನಲ್ಲಿ ಮಹದಾಯಿ ಯೋಜನೆಗೆ ಅತಿ ಹೆಚ್ಚು ನೀಡಲು ನಿರ್ಧರಿಸಲಾಗಿದೆ. ಯೋಜನೆಯನ್ನು ಕಾಲಮಿತಿಯಲ್ಲಿ ಮುಗಿಸಲು ನಿರ್ಧರಿಸಲಾಗಿದೆ. ಹಲವು ದಶಕಗಳ ಹೋರಾಟದ ನಂತರ ಮಹದಾಯಿ ನದಿ ಯೋಜನೆಗೆ ಇದ್ದ ಕಂಟಕಗಳು ಒಂದೊಂದಾಗಿ ದೂರವಾಗುತ್ತಿವೆಯಾದರೂ ವಿವಾದ ಮುಂದುವರಿದೇ ಇದೆ. ರಾಜ್ಯ ಸರ್ಕಾರವು ತನ್ನ ಪಾಲಿನ ನೀರನ್ನು ಬಳಸಿಕೊಳ್ಳಲು ಸಜ್ಜಾಗಿದ್ದು ಅಗತ್ಯ ಸಂಪನ್ಮೂಲ ಒದಗಿಸಲು ನಿರ್ಧರಿಸಿದೆ. ಪ್ರಸಕ್ತ ಸಾಲಿನ ಬಜೆಟ್‌ನಲ್ಲೇ ಹೆಚ್ಚಿನ ಅನುದಾನ ಒದಗಿಸಲಾಗುವುದು. ಕೇಂದ್ರ ಸರ್ಕಾರ ಮತ್ತು ಮಹದಾಯಿ ನ್ಯಾಯಾಧಿಕರಣ ನೀಡಿರುವ ತೀರ್ಪನ್ನು ಪರಿಗಣಿಸಿ ರಾಜ್ಯ ಸರ್ಕಾರ ಮುಮದಡಿ ಇಡಲಿದೆ. ಉತ್ತರ ಕರ್ನಾಟಕ ಭಾಗದ ಜನರಿಗೆ ಕುಡಿಯುವ ನೀರಿನ ಸೌಲಭ್ಯ ಕಲ್ಪಿಸಲು ಮೊದಲಾದ್ಯತೆ ಮೇರೆಗೆ ಕಾಮಗಾರಿ ಕೈಗೆತ್ತಿಕೊಳ್ಳಲಾಗುವುದು. ತದನಂತರ ಇನ್ನುಳಿದ ಯೋಜನೆಳಿಗೆ ಆದ್ಯತೆ ನೀಡಲಾಗುವುದು. ಯೋಜನೆ ಅನುಷ್ಠಾನ ಕುರಿತಂತೆ ಯಾವುದೇ



ವಿಪಕ್ಷದವರ ಗದ್ದಲ, ಗಲಾಟೆ ಮಧ್ಯೆಯೇ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಅವರು ರಾಜ್ಯಪಾಲರ ವಂದನಾ ನಿರ್ಣಯದ ಮೇಲಿನ ಚರ್ಚೆಗೆ ಉತ್ತರ ನೀಡಿದರು.

- ಬರ-ನೆರೆ ಪರಿಸ್ಥಿತಿ ಯಶಸ್ವಿ ನಿಭಾವಣೆ
- ರಾಜ್ಯ ಸರ್ಕಾರಕ್ಕೆ ನೈತಿಕ ಬಲ ದಕ್ಕಿದೆ
- 117 ವರ್ಷಗಳ ಇತಿಹಾಸದಲ್ಲೇ ಅತಿವೃಷ್ಟಿ
- ಸಂತ್ರಸ್ತರ ಕಣ್ಣೀರೊರೆಸಲು ಹಗಲಿರುಳು ಪ್ರವಾಸ
- ಅತಿವೃಷ್ಟಿಯಿಂದ 35,160,81 ಕೋಟಿ ರೂ. ಹಾನಿ
- ಕೇಂದ್ರದಿಂದ 1869,85 ಕೋಟಿ ರೂ. ಪರಿಹಾರ ಬಿಡುಗಡೆ
- 2.47 ಲಕ್ಷ ಮನೆಗಳಿಗೆ ಹಾನಿ
- ಪ್ರವಾಹ ಪೀಡಿತ ಹಳ್ಳಿಗಳ ಸ್ಥಳಾಂತರಕ್ಕೆ ಕ್ರಮ
- ಪರಿಹಾರ ಕಾರ್ಯಗಳಿಗೆ 3338 ಕೋಟಿ ರೂ. ವೆಚ್ಚ
- ಮನೆ ಕಳೆದುಕೊಂಡವರಿಗೆ ಐದು ಲಕ್ಷ ರೂ. ಪರಿಹಾರ
- ಈಗಾಗಲೇ ತಲಾ ಒಂದು ಪಕ್ಷ ರೂ ಬಿಡುಗಡೆ
- ಅಂಗಡಿ, ತೋಟದ ಮನೆಗಳು, ನೀರಾವರಿ, ಒಣಭೂಮಿ ಮಗ್ಗ ಹಾನಿಗೊಳಗಾದ ನೇಕಾರರಿಗೂ ಪರಿಹಾರ
- 41 ಲಕ್ಷ ಕಿಸಾನ್ ಯೋಜನೆ ಫಲಾನುಭವಿಗಳಿಗೆ ಪರಿಹಾರ
- ಮಧ್ಯಮ, ದೀರ್ಘಾವಧಿ, ಟ್ರ್ಯಾಕ್ಟರ್, ಪಂಪ್‌ಸೆಟ್, ಕೃಷಿ ಸಲಕರಣೆಗಳ ಸಾಲ ಮನ್ನಾ
- ಪ್ರಧಾನಮಂತ್ರಿ ಫಸಲ್ ಬಿಮಾ ಯೋಜನೆಯಡಿ 14 ಲಕ್ಷ ರೈತರಿಗೆ ನೆರವು
- 23 ಸಾವಿರ ಮೀನುಗಾರರ 50 ಸಾವಿರ ರೂ. ಸಾಲ ಮನ್ನಾ
- ಹಾನಿಗೊಳಗಾದ 330 ದೋಣಿ, ಬಲೆಗಳಿಗೂ ಪರಿಹಾರ
- ರಸ್ತೆ ನಿರ್ಮಾಣಕ್ಕಾಗಿ 500 ಕೋಟಿ ರೂ. ಮೀಸಲು
- ಕಡೆಚೂರ್ ಬಳಿ ಕೈಗಾರಿಕಾ ಪಾರ್ಕ್
- ಬೀದರ್‌ನಿಂದ ವಿಮಾನಯಾನ ಸೌಲಭ್ಯ
- ಬೆಂಗಳೂರು ಸಬ್‌ಅರ್ಬನ್ ರೈಲು ಯೋಜನೆಗೆ ಅಸ್ತು
- ಮನೆಬಾಗಿಲಿಗೆ ಸೇವೆ: 'ಜನ್‌ಸೇವಕ್' ಯೋಜನೆ ಜಾರಿ
- ಆರು ಇಲಾಖೆಗಳು ಸುವರ್ಣ ಸೌಧಕ್ಕೆ ಸ್ಥಳಾಂತರ

ರೀತಿಯ ಹೊಂದಾಣಿಕೆಯನ್ನು ಮಾಡಿಕೊಳ್ಳಲು ರಾಜ್ಯ ಸರ್ಕಾರ ಸಜ್ಜಾಗಿಲ್ಲ. ಕರ್ನಾಟಕದ ಪಾಲಿನ ನೀರು ನಮಗೆ ದೊರೆಯಬೇಕು ಎಂಬ ಮಾತಿನಿಂದ ಹಿಂದೆ ಸರಿಯುವ ಮಾತೇ ಇಲ್ಲ ಎಂದು ಸ್ಪಷ್ಟಪಡಿಸಿದರು.

ನಾಡಿನ ಸರ್ವಾಂಗೀಣ ಅಭಿವೃದ್ಧಿಗೆ ರಾಜ್ಯ ಸರ್ಕಾರ ಕಂಕಣಬದ್ಧವಾಗಿದೆ. ಹುಬ್ಬಳ್ಳಿಯಲ್ಲಿ ಇತ್ತೀಚೆಗೆ ನಡೆಸಿದ ಹೂಡಿಕೆದಾರರ ಸಮಾವೇಶ ಯಶ ಕಂಡಿದೆ. ಸುಮಾರು ಲಕ್ಷ ಕೋಟಿಗೂ ಹೆಚ್ಚು ಬಂಡವಾಳ ಉತ್ತರ ಕರ್ನಾಟಕಕ್ಕೆ ಹರಿದು ಬರಲಿದೆ. ತನ್ಮೂಲಕ ಉದ್ಯೋಗ ಕ್ಷೇತ್ರದಲ್ಲಿ ಮಹತ್ತರ ಬದಲಾವಣೆ ಆಗುವ ನಿರೀಕ್ಷೆ ಸರ್ಕಾರದ್ದಾಗಿದೆ ಎಂದರು. ಹುಬ್ಬಳ್ಳಿ-ಧಾರವಾಡ ಸೇರಿದಂತೆ ಕಲ್ಯಾಣ ಕರ್ನಾಟಕ ಭಾಗಕ್ಕೂ ಆದ್ಯತೆ ನೀಡಲಾಗುವುದು. ಇದೇ ರೀತಿ ರಾಜ್ಯದ ಎಲ್ಲೆಡೆಯೂ ಸರ್ವಾಂಗೀಣ ಪ್ರಗತಿ ಆಗಬೇಕೆಂಬ ಧ್ಯೇಯೋದ್ದೇಶದೊಂದಿಗೆ ರಾಜ್ಯ ಸರ್ಕಾರವು ಕಾರ್ಯಕ್ರಮಗಳನ್ನು ಹಮ್ಮಿಕೊಂಡು ಮುನ್ನಡೆಯುತ್ತಿದೆ ಎಂದರು.

ನೆರೆ ಪರಿಹಾರ ವಿಷಯದಲ್ಲಿ ರಾಜ್ಯ ಸರ್ಕಾರ ಯಾವುದೇ ಹಿನ್ನಡೆ ಕಂಡಿಲ್ಲ. ವಿಪಕ್ಷಗಳ ಹರಿಹಾಯ್ದಂತೆ ಕೇಂದ್ರ ಸರ್ಕಾರ ಯಾವುದೇ ಮಲತಾಯಿ ಧೋರಣೆ ಅನುಸರಿಸಿಲ್ಲ. ನೆರೆ ಹಾವಳಿ ಸಂದರ್ಭದಲ್ಲಿ ಪರಿಸ್ಥಿತಿ ಪರಿಶೀಲನೆಗೆ ಪ್ರಧಾನಿ ನರೇಂದ್ರ ಮೋದಿ ಬರಲಿಲ್ಲ ಎಂದು ಹುಯಿಲೆಬ್ಬಿಸಿದ್ದವು. ಆದರೆ, ಗೃಹಸಚಿವ ಅಮಿತ್ ಶಾ ಆಗಮಿಸಿ ನೆರೆ ಪೀಡಿತ ಪ್ರದೇಶದಲ್ಲಿ ವೈಮಾನಿಕ ಅಧ್ಯಯನ ನಡೆಸುವ ಮೂಲಕ ರಾಜ್ಯ ಎದುರಿಸುತ್ತಿರುವ ಪರಿಸ್ಥಿತಿಯನ್ನು ಕೇಂದ್ರ ಸರ್ಕಾರಕ್ಕೆ ಮನವರಿಕೆ ಮಾಡಿಕೊಟ್ಟಿದ್ದಾರೆ. ಇದೇ ಹಿನ್ನೆಲೆಯಲ್ಲಿ ಕೇಂದ್ರ ಸರ್ಕಾರವು ತ್ವರಿತವಾಗಿ ಪರಿಹಾರ ಬಿಡುಗಡೆ ಮಾಡಿದೆ. ಇನ್ನೂ ಪರಿಹಾರ ಹರಿದುಬರಲಿದೆ ಎಂದರು.

ನೆರೆ ಪರಿಹಾರ ನೀಡುವಲ್ಲಿ ಯಾವುದೇ ತಾರತಮ್ಯ ಮಾಡಿಲ್ಲ. ಸಂತ್ರಸ್ತರ ಪರವಾಗಿಯೇ ರಾಜ್ಯ ಸರ್ಕಾರ ಕೆಲಸ ಮಾಡುತ್ತಿದೆ. ಅಧಿಕಾರಿ ವರ್ಗ ಸಂಕಷ್ಟಕರ ಪರಿಸ್ಥಿತಿಯಲ್ಲಿ ಅವಿರತವಾಗಿ ಶ್ರಮಿಸುವ ಮೂಲಕ ಪರಿಹಾರ ಕಾರ್ಯ ಕೈಗೊಂಡಿದ್ದಾರೆ. ರಾಜ್ಯದಾದ್ಯಂತ ಹಗಲಿರುಳು ಓಡಾಡಿ ಸಂತ್ರಸ್ತರ ಕಣ್ಣೀರು ಒರೆಸಿದ್ದೇನೆ ಎಂದು ಹೇಳಿದರು.

ಉಪಚುನಾವಣೆಯಲ್ಲಿ ಹನ್ನೆರಡು ಸೀಟು ಗೆಲ್ಲುವ ಮೂಲಕ ರಾಜ್ಯ ಸರ್ಕಾರವು ನೈತಿಕ ಬಲ ಹೆಚ್ಚಿಸಿಕೊಂಡಿದೆ ಎಂದು ಸಮರ್ಥನೆ ಮಾಡಿಕೊಂಡ ಅವರು ಈ ದಿಸೆಯಲ್ಲಿ ವಿಪಕ್ಷಗಳ ಟೀಕೆಗಳಿಗೆ ಯಾವುದೇ ನೆಲೆ ಇಲ್ಲ ಎಂದು ಪ್ರತಿಪಾದಿಸಿದ್ದಾರೆ.